ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು (ಕಟ್ಟಡ ಪರವಾನಗಿ ಕೋಶ– ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – 560 002

ಜಂಟಿ ನಿರ್ದೇಶಕರು (ನಗರ ಯೋಜನೆ-ಉತ್ತರ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ನಂ. CC/05/23-24
ದಿನಾಂಕ 06/01/2024

ಸಂಖ್ಯೆ: BBMP/Addl.Dir/ JDNORTH/ LP/0004/2020-21 ದಿನಾಂಕ: 06-01-2024

# ಪ್ರಾರಂಭಿಕ ಪ್ರಮಾಣಪತ್ರ

ವಿಷಯ: ಆಸ್ತಿ ಖಾತಾ ಸಂಖ್ಯೆ: 89–71, ಸರ್ವೆ ನಂ.84/3, ಹೆಣ್ಣೂರು ಮುಖ್ಯ ರಸ್ತೆ, ಕಾಚರಕನಹಳ್ಳಿ, ವಾರ್ಡ್ ನಂ.29, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ನೆಲ+ಮೇಲಿನ 4 ಅಂತಸ್ತುಗಳಲ್ಲಿ 54 ರೂಮ್‌ಗಳುಳ್ಳ ಹಾಸ್ಟೆಲ್ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

ಉಲ್ಲೇಖ: 1) ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/ JDNORTH/ LP/0004/2020-21 ರಂತೆ ದಿನಾಂಕ: 07–10–2021.

2) ತಮ್ಮ ಮನವಿ ಪತ್ರ ದಿನಾಂಕ: 28–03–2023.

* * * * * * *

ಆಸ್ತಿ ಖಾತಾ ಸಂಖ್ಯೆ: 89–71, ಸರ್ವೆ ನಂ.84/3, ಹೆಣ್ಣೂರು ಮುಖ್ಯ ರಸ್ತೆ, ಕಾಚರಕನಹಳ್ಳಿ, ವಾರ್ಡ್ ನಂ.29, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ನೆಲ+ಮೇಲಿನ 4 ಅಂತಸ್ತುಗಳಲ್ಲಿ 54 ರೂಮ್‌ಗಳುಳ್ಳ ಹಾಸ್ಟೆಲ್ ಕಟ್ಟಡ ನಿರ್ಮಿಸಲು ಈ ಕಛೇರಿಯಿಂದ ಸಂಖ್ಯೆ: BBMP/Addl.Dir/ JDNORTH/ LP/0004/2020-21 ರಂತೆ ದಿನಾಂಕ: 07–10–2021 ರಂದು ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ. ಸದರಿ ನೆಲ+ಮೇಲಿನ 4 ಅಂತಸ್ತುಗಳಲ್ಲಿ 54 ರೂಮ್‌ಗಳುಳ್ಳ ಹಾಸ್ಟೆಲ್ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಉಲ್ಲೇಖ (2) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ, ಕಟ್ಟಡ ನಿರ್ಮಾಣದ ಸ್ಥಳವನ್ನು ಪರಿಶೀಲಿಸಲಾಗಿ, ಮಂಜೂರಾತಿ ನಕ್ಷೆಯನ್ವಯ ಕಟ್ಟಡ ನಿರ್ಮಿಸುತ್ತಿರುವುದನ್ನು ಪರಿವೀಕ್ಷಿಸಲಾಗಿದೆ.

ಅಪರ ನಿರ್ದೇಶಕರು, ನಗರ ಯೋಜನೆ ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 27-12-2023 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಸಂಬಂಧ ಒಟ್ಟು ಶುಲ್ಕ ರೂ. 60,700/– ಗಳಿಗೆ ಡಿ.ಡಿಯನ್ನು ಸಲ್ಲಿಸಿ ಈ ಕಛೇರಿಯ ರಶೀದಿ ಸಂಖ್ಯೆ: RE-ifms 331-TP/000105, ದಿನಾಂಕ: 04-01-2024 ರಂದು ಸಂದಾಯ ಮಾಡಿರುವುದರಿಂದ ನೆಲ+ಮೇಲಿನ 4 ಅಂತಸ್ತುಗಳಲ್ಲಿ 54 ರೂಮ್‌ಗಳುಳ್ಳ ಹಾಸ್ಟೆಲ್ ಕಟ್ಟಡಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

**ಷರತ್ತುಗಳು**

1) ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2) ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ–ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಯಾವುದೇ ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
3) ನಕ್ಷೆ ಮಂಜೂರಾತಿಯ ಸಿಂಧುತ್ವವು ಉಲ್ಲೇಖ (1) ರಂತೆ ಅನುಮೋದನೆ ನೀಡಿದ ದಿನಾಂಕದಿಂದ 5 ವರ್ಷಗಳ ಅವಧಿಗೆ ಮಾನ್ಯತೆ ಹೊಂದಿದ್ದು, ಈ ಅವಧಿಯೊಳಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.
4) ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ–ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.

5) ನಿವೇಶನದ ಖಾತಾ ವಿಭಜನೆ, ದಾಖಲಾತಿಗಳನ್ನು / ಸ್ವತ್ತಿನ ಹಕ್ಕನ್ನು ಬದಲಾಯಿಸಿದಲ್ಲಿ ಮತ್ತು ಯಾವುದೇ ರೀತಿ ದಾಖಲಾತಿಗಳನ್ನು ಅಥವಾ ವಾಸ್ತವಾಂಶ ಮರೆಮಾಚಿದಲ್ಲಿ ಅರ್ಜಿದಾರರು ನೇರ ಹೊಣೆಯಾಗಿರುತ್ತಾರೆ ಮತ್ತು ನೀಡಲಾದ ಕಟ್ಟಡ ನಕ್ಷೆ ಮಂಜೂರಾತಿಯು ತನ್ನಿಂದತಾನೇ ರದ್ದುಗೊಳ್ಳುತ್ತದೆ.

6) ವಿವಿಧ ಇಲಾಖೆಗಳಿಂದ ಪಡೆದಿರುವ ನಿರಾಕ್ಷೇಪಣಾ ಪತ್ರಗಳಲ್ಲಿ ವಿಧಿಸಿರುವ ಷರತ್ತುಗಳನ್ನು ಪಾಲಿಸತಕ್ಕದ್ದು

7) ಅರ್ಜಿದಾರರು/ಮಾಲೀಕರು/ಡೆವಲಪರ್‌ಗಳು ಕಟ್ಟಡ ನಿರ್ಮಾಣ ಮತ್ತು ಕಟ್ಟಡ ತೆರವಿನ ತ್ಯಾಜ್ಯದ ನಿರ್ವಹಣೆ ಮತ್ತು ವಿಲೇವಾರಿಯನ್ನು ಮಾಡಲು ಘನತ್ಯಾಜ್ಯ ನಿರ್ವಹಣೆ (ಎಸ್.ಡಬ್ಲ್ಯೂ.ಎಂ) ಉಪನಿಯಮ 2016 ಕ್ಕೆ ಬದ್ಧವಾಗಿರತಕ್ಕದ್ದು.

8) ಅರ್ಜಿದಾರರು/ಮಾಲೀಕರು/ಡೆವಲಪರ್‌ಗಳು ವಿದ್ಯುತ್ ಚಾಲಿತ ವಾಹನಗಳ ಚಾರ್ಜಿಂಗ್ ಪಾಯಿಂಟ್‌ಗಳನ್ನು ಅಳವಡಿಸಲು ಅಗತ್ಯ ಕ್ರಮವಹಿಸುವುದು.

9) ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಸಂಸ್ಕರಿಸಿದ (Treated Water Utilisation for Construction) ನೀರನ್ನು ಕಟ್ಟಡ ನಿರ್ಮಾಣ ಕಾರ್ಯಕ್ಕೆ ಕಡ್ಡಾಯವಾಗಿ ಬಳಸಿಕೊಳ್ಳುವುದು.

10) ಅರ್ಜಿದಾರರು/ಮಾಲೀಕರು/ಡೆವಲಪರ್‌ಗಳು ಪ್ರತಿ 240.00 ಚ.ಮೀ ಅನುಪಾತ ವಿಸ್ತೀರ್ಣಕ್ಕೆ ಒಂದರಂತೆ ಗಿಡವನ್ನು ನೆಡುವುದು.

6/1/24

ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

6/1/24

ಗೆ,

ಮೆ॥ ಯುನೈಟೆಡ್ ಕ್ರಿಸ್ಚಿಯನ್ ಫೆಲ್ಲೋಶಿಪ್ ಬೆಂಗಳೂರು
ನಂ.84/3, ಹೆಣ್ಣೂರು ಮುಖ್ಯ ರಸ್ತೆ,
ಕಾಚರಕನಹಳ್ಳಿ, ಬೆಂಗಳೂರು